(ಗೊಂದಲ)

(ಈ ಹಂತದಲ್ಲಿ ಬಿಜೆಪಿ ಮತ್ತು ಜೆಡಿ(ಎಸ್) ಪಕ್ಷದ ಸದಸ್ಯರು ಧರಣಿ ನಿರತರಾಗಿದ್ದು ಸರ್ಕಾರದ ವಿರುದ್ಧ ಘೋಷಣೆ ಕೂಗುತ್ತಿದ್ದರು)

ಅಧ್ಯಕ್ಷರು : ಈಗ ವಸತಿ ಸಚಿವರು ಹೇಳಿದ್ದಾರೆ. ನಾನು ಮತ್ತೊಮ್ಮೆ ಮಾನ್ಯ ಮುಖ್ಯಮಂತ್ರಿಗಳ ಜೊತೆ ಈ ವಿಷಯದ ಬಗ್ಗೆ ನಾಳೆ ಮಾತನಾಡುತ್ತೇನೆ. ಇದಕ್ಕೆ ಏನಾದರೂ ಒಂದು ಪರಿಹಾರವನ್ನು ಕಂಡುಕೊಳ್ಳೋಣ.

(ಗೊಂದಲ)

(ಈ ಹಂತದಲ್ಲಿ ಆಡಳಿತ ಪಕ್ಷದ ಹಲವು ಮಾನ್ಯ ಸದಸ್ಯರುಗಳು ಎದ್ದು ನಿಂತು ಒಟ್ಟಿಗೆ ಮಾತನಾಡುತ್ತಿದ್ದರು)

ಅಧ್ಯಕ್ಷರು : ಇವತ್ತೇ ನಾನು ಮಾನ್ಯ ಮುಖ್ಯಮಂತ್ರಿಗಳ ಜೊತೆ ಮಾತನಾಡುತ್ತೇನೆ, ಈ ಬಗ್ಗೆ ಸಮಸ್ಯೆ ಬಗೆಹರಿಸೋಣ.

ಶ್ರೀ ಜಗದೀಶ್ ಶೆಟ್ಟರ್ : 50000 ಮನೆಗಳನ್ನು ಕೇವಲ ಕಾಂಗ್ರೆಸ್ ಪಕ್ಷದ ಶಾಸಕರಿಗೆ ಕೊಟ್ಟಿದ್ದಾರೆ.

(ಗೊಂದಲ)

ಅಧ್ಯಕ್ಷರು : ಅವರು ಈ ರೀತಿ ಮಾಡಿರುವುದು ನನಗೆ ಗೊತ್ತಿರಲಿಲ್ಲ. ನಾನು ಈಗ ಮುಖ್ಯಮಂತ್ರಿಯವರನ್ನು ಕರೆದು ಇವತ್ತು ಅಥವಾ ನಾಳೆ ಮಾತನಾಡುತ್ತೇನೆ.

(ಗೊಂದಲ)

(ಈ ಹಂತದಲ್ಲಿ ಬಿಜೆಪಿ ಮತ್ತು ಜೆಡಿ(ಎಸ್) ಪಕ್ಷದ ಸದಸ್ಯರು ಧರಣಿ ನಿರತರಾಗಿದ್ದು ಸರ್ಕಾರದ ವಿರುದ್ಧ ಘೋಷಣೆ ಕೂಗುತ್ತಿದ್ದರು)

ಅಧ್ಯಕ್ಷರು : ಈಗ ಸದನವನ್ನು ಹತ್ತು ನಿಮಿಷಗಳ ಅವಧಿಗೆ ಮುಂದೂಡಿ ಮಾನ್ಯ ಮುಖ್ಯಮಂತ್ರಿವರ ಜೊತೆ ಮಾತನಾಡಿ ಬಂದು ಪುನಃ ಸದನದ ಕಲಾಪವನ್ನು ಮುಂದುವರೆಸೋಣ.

(ಈ ಹಂತದಲ್ಲಿ ಸದನದ ಕಲಾಪವನ್ನು ಮಧ್ಯಾಹ್ನ 12.34 ಗಂಟೆಗೆ ಮುಂದೂಡಿ ಹತ್ತು ನಿಮಿಷಗಳ ನಂತರ ಪುನಃ ಸೇರುವಂತೆ ನಿಶ್ಚಯಿಸಿತು)